**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ ಹಾಗೂ ಶ್ರೀ ಮರಿತಿಬ್ಬೇಗೌಡ, ರವರು ನಿಯಮ 72 ರಡಿ ನೀಡಿರುವ ಸೂಚನಾ ಪತ್ರಕ್ಕೆ ಸರ್ಕಾರದ**

***ವಿಷಯ:-*** "ರಾಜ್ಯದಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ 2015 ರಕ್ಕಿಂತ ಪೂರ್ವದಲ್ಲಿ ಖಾಲಿಯಾದ ಹುದ್ದೆಗಳನ್ನು ತುಂಬುವುದನ್ನು ನಿರ್ಬಂಧಿಸಲಾಗಿದೆ ಹಾಗೂ ಆರ್ಥಿಕ ಮಿತವ್ಯವನ್ನು ಹೇರಿದ್ದರಿಂದ ಶಿಕ್ಷಣ ಸಂಸ್ಥೆಗಳು ಸಾಕಷ್ಟು ಶಿಕ್ಷಕರಿಲ್ಲದೆ ಮಕ್ಕಳಿಗೆ ಸಾಕಷ್ಟು ತೊಂದರೆಯಾಗಿದೆ. ಮತ್ತು ಖಾಸಗಿ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿಗಳಿಗೆ ಕರೋನಾ ನೆಪ ಹೇಳಿ ಅವರಿಗೆ ಸಂಬಳ ಪಾವತಿಸದಿಲ್ಲದಿರುವುದರಿಂದ ಅವರ ಪರಿಸ್ಥಿತಿ ಬಹಳ ಗಂಭೀರವಾಗಿದ್ದು ಸದರಿ ಆರ್ಥಿಕ ಮಿತವ್ಯಯವನ್ನು ಹಿಂಪಡೆಯುವುದರ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುತ್ತೇವೆ".

***ಉತ್ತರ:-*** ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜ್ಯದಲ್ಲಿ ತೀವ್ರ ಆರ್ಥಿಕ ಸಂಕಷ್ಟ ಸೃಷ್ಟಿಯಾಗಿರುವ ಹಿನ್ನೆಲೆಯಲ್ಲಿ ಸುತ್ತೋಲೆ **ಸಂಖ್ಯೆ:ಆಇ 157 ವೆಚ್ಚ-8 2020, ದಿನಾಂಕ:10.06.2020** ರನ್ವಯ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ನಿವೃತ್ತಿ, ನಿಧನ ರಾಜೀನಾಮೆ ಇತರೆ ಯಾವುದೇ ಕಾರಣಗಳಿಂದ ಖಾಲಿಯಾಗುವ ಹುದ್ದೆಗಳನ್ನು 2020-21 ನೇ ಸಾಲಿನಲ್ಲಿ ಭರ್ತಿ ಮಾಡುವುದನ್ನು ನಿರ್ಬಂಧಿಸಲಾಗಿದೆ. ಇದಲ್ಲದೇ ಸುತ್ತೋಲೆ **ಸಂಖ್ಯೆ:ಆಇ 03 ಬಿಇಎಂ 2020, ದಿನಾಂಕ:06.07.2020** ರನ್ವಯ 2020-21 ನೇ ಸಾಲಿನ ಆರ್ಥಿಕ ವರ್ಷದಲ್ಲಿ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳು ಮತ್ತು ಬ್ಯಾಕ್ ಲಾಗ್ ಹುದ್ದೆಗಳೂ ಸೇರಿದಂತೆ ರಾಜ್ಯ ಸಿವಿಲ್ ಸೇವೆಯಲ್ಲಿನ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಸಹ ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ.

ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜಸ್ವ ಸಂಗ್ರಹಣೆಯಲ್ಲಿ ತೀವ್ರ ಕುಸಿತ ಉಂಟಾಗಿರುವುದರಿಂದ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸುವುದು ಅಗತ್ಯವಾಗಿರುತ್ತದೆ. ಇದಕ್ಕಾಗಿ ಸರ್ಕಾರದ ವೆಚ್ಚದ ಬಾಬ್ತಿನಲ್ಲಿ ಮಿತವ್ಯಯ ಪಾಲಿಸುವ ಅವಶ್ಯಕತೆ ಇರುವುದರಿಂದ ಆರ್ಥಿಕ ಮಿತವ್ಯಯದ ಆದೇಶವನ್ನು ತಕ್ಷಣ ಹಿಂಪಡೆಯುವುದು ಕಷ್ಟಸಾಧ್ಯವಾಗಿರುತ್ತದೆ.

ಸಂಖ್ಯೆ:ಆಇ 223 ವೆಚ್ಚ-8/2020

ಬಿ.ಎಸ್. ಯಡಿಯೂರಪ್ಪ

(ಬಿ.ಎಸ್.ಯಡಿಯೂರಪ್ಪ)

ಮುಖ್ಯ ಮಂತ್ರಿ